**ದಿನಾಂಕಃ 06-02-2026 ರಂದು ಸಾಕ್ಷಿದಾರರನ್ನು ಕರೆಯಿಸಿ ಪ್ರಮಾಣ ವಚನ ಭೋದಿಸಲಾಯಿತು.**

ನನ್ನ ಮುಖ್ಯ ವಿಚಾರಣೆಯನ್ನು ಪ್ರಮಾಣ ಪತ್ರದ ಮೂಲಕ ಸಲ್ಲಿಸಿದ ಅದರಲ್ಲಿ ಬರೆದಿರುವ ವಿಷಯಗಳು ನಾನೇ ಹೇಳಿ ಬರೆಸಿದ್ದೇನೆ. ಸದರಿ ಸಂಗತಿಗಳು ಸತ್ಯದಿಂದ ಕೂಡಿರುತ್ತವೆ.

**ಮುಖ್ಯ ವಿಚಾರಣೆ 2 ನೇ ಎದುರುದಾರರ ಪರ ಶ್ರೀ ಆರ್ ಎಸ್ ಎಸ್ ವಕೀಲರಿಂದಃ**

ವಿಮಾ ಪಾಲಿಸಿಯನ್ನು ಹಾಜರುಪಡಿಸಿದ್ದು ಅದನ್ನು ನಿ ಆರ್-8 ಎಂದು ಗುರುತಿಸಲಾಯಿತು.

**ಪಾಟೀ ಸವಾಲುಃ ಅರ್ಜಿದಾರರ ಪರ ಶ್ರೀ ಎನ್ ಎಸ್ ಪಿ ವಕೀಲರಿಂದಃ**

ನಾವು ಕೊಟ್ಟ ವಿಮೆಯ ವಾಹನದ ಮೇಲೆ ಅಂತಿಮ ವರದಿ ಸಲ್ಲಿಸಿದ್ದಾರೆ ಎಂದರೆ ಅಂತಿಮ ವರದಿಯಲ್ಲಿ ವಾಹನದ ಸಂಖ್ಯೆ ಬೇರೆ ಇದೆ ಎಂದು ನುಡಿಯುತ್ತಾರೆ. ಟಿಪ್ಪರ್ ವಾಹನ ಸಂಖ್ಯೆ ಕೆ ಎ 17 ಬಿ 6305 ರ ಮೇಲೆ ಎಫ್ ಐ ಆರ್ ಆಗಿತ್ತು ಎಂದರೆ ಸರಿ. ಆ ಸಮಯದಲ್ಲಿ ಟಿಪ್ಪರ್ ವಾಹನಕ್ಕೆ ವಿಮೆ ಚಾಲ್ತಿಯಲ್ಲಿತ್ತು ಎಂದರೆ ಸರಿ. ವಾಹನದ ಚಾಲಕನಿಗೆ ಡಿ ಎಲ್ ಇತ್ತು ಎಂದರೆ ಸಾಕ್ಷಿ ಎಫ್ ಐ ಆರ್ ನಲ್ಲಿ ಚಾಲಕನ ಹೆಸರು ಮೋಹನ ಎಂದು, ಅಂತಿಮ ವರದಿಯಲ್ಲಿ ಮುರುಗನ ಎಂದು ಇರುತ್ತದೆ ಎಂದು ನುಡಿಯುತ್ತಾರೆ. ನಾವು ಅಂತಿಮ ವರದಿಯನ್ನು ಮೇಲಿನ ಕೋರ್ಟಿನಲ್ಲಿ ಪ್ರಶ್ನಿಸಿರುವುದಿಲ್ಲ. ಅಪಘಾತದ ಸಮಯದಲ್ಲಿ ವಾಹನಕ್ಕೆ ಎಫ್ ಸಿ , ಪರ್ಮಿಟ್ ಚಾಲ್ತಿಲ್ಲಿತ್ತು ಎಂದರೆ ಸರಿಯಲ್ಲ. ಅರ್ಜಿದಾರರಿಗೆ ಪರಿಹಾರ ಕೊಡುವುದನ್ನು ತಪ್ಪಿಸುವುಕ್ಕೋಸ್ಕರ ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

**ಮರು ವಿಚಾರಣೆ ಇಲ್ಲ.**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದ ಮೇರೆಗೆ ಬೆರಳಚ್ಚು ಮಾಡಲಾಯಿತು).

ಓ. ಹೇ. ಕೇ. ಸರಿ ಇದೆ.

ಸಹಿ/-

(ಶ್ರೀಮತಿ ಹುಲ್ಲೂರ ಹೇಮಲತಾ ಬಸಪ್ಪ)
ಪ್ರಧಾನ ಹಿರಿಯ ದಿವಾಣಿ ನ್ಯಾಯಾಧೀಶರು,
ರಾಣೇಬೆನ್ನೂರು.